**<u>ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಚಿಂತಾಮಣಿ.</u>**

**<u>ಸಿ.ಸಿ.ನಂ. 1473/2019</u>**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಮುನಿಶಾಮಿರೆಡ್ಡಿ** | | |
| **ಗಂಡಃತಂದೇಃಹೆಸರು** | **ಮುನಿವೆಂಕಟಪ್ಪ** | **ಪಿಡಬ್ಲೂಃ** | **4** |
| **ವಯಸ್ಸುಃ** | **50 ವರ್ಷ** | **ಸಿಡಬ್ಲೂಃ** | **10** |
| **ಉದ್ಯೋಗಃ** | **ವ್ಯವಸಾಯ** | | |
| **ವಾಸ ಸ್ಥಳಃ** | **ಬೊಮ್ಮೆಕಲ್ಲಹಳ್ಳಿ ಗ್ರಾಮ** | | |

**<u>ದಿನಾಂಕ 20-08-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ-</u>**

ಸಾಕ್ಷಿಗೆ ನಿಪಿ 2 ನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಅದನ್ನು ನಿ.ಪಿ.2(ಬಿ) ಎಂದು ಗುರುತಿಸಲಾಯಿತು. ನಾನು ಊರಲ್ಲಿ ಇದ್ದಾಗ ಪೋಲೀಸರು ಮಹಜರ್ ಮಾಡುತ್ತಾ ಇದ್ದೇವೆ ಸಹಿ ಹಾಕು ಎಂದಿದ್ದಕ್ಕೆ ಸಹಿ ಹಾಕಿದೆ. ನಿಪಿ 2 ಕ್ಕೆ ನಾನು 5 ವರ್ಷದ ಹಿಂದೆ ಸಹಿ ಮಾಡಿರುತ್ತೇನೆ. ನಿ.ಪಿ.2 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**<u>ಪಾಟೀ ಸವಾಲುಃಃ ಮಾನ್ಯ ಸ.ಸ.ಅ. ರವರಿಂದಃಃ</u>**

ದಿನಾಂಕಃ04-09-2019 ರಂದು ಚಿಂತಾಮಣಿ ಶ್ರೀನಿವಾಸಪುರ ರಸ್ತೆಯ ಸಿದ್ದ ಮಠ ಗ್ರಾಮದ ಸಮೀಪದ ಮೋರಿ ಬಳಿಯ ಟಾರು ರಸ್ತೆಯಲ್ಲಿ ಅಂದರೆಕೃತ್ಯ ನಡೆದ ಸ್ಥಳದಲ್ಲಿ ಪೋಲೀಸರು ನನ್ನ ಮತ್ತು ಚಾಸಾ 1 ಮತ್ತು ಚಾಸಾ 11 ರವರ ಸಂಜೆ 5.15-6.00 ಗಂಟೆಯವರೆಗೆ ಸ್ಥಳ ಪಂಚನಾಮೆಯನ್ನು ಮಾಡಿದರು ಎಂದರೆ ಸರಿಯಲ್ಲ. ನಿ.ಪಿ.2 ರಲ್ಲಿ ಬರೆದಿರುವ ಸಂಗತಿಗಳ ಬಗ್ಗೆ ಗೊತ್ತಿದ್ದರು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಆರೋಪಿಯೊಂದಿಗೆ ರಾಜಿಮಾಡಿಕೊಂಡದ್ದಕೋಸ್ಕರ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿ ಪರ ಶ್ರೀ.ಟಿ ಕೆ ಎಸ್. ವಕೀಲರಿಂದಃ ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.